# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:22.01.2020**

## ಹೊಸೂರು ರಸ್ತೆಯ ಸರ್ಜಾಪುರ ಜಂಕ್ಷನ್‌ನಲ್ಲಿ ಪಾದಚಾರಿ ಮೇಲುಸೇತುವೆ ಉದ್ಘಾಟನೆ:



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸಾರ್ವಜನಿಕ ಖಾಸಗಿ ಸಹಭಾಗಿತ್ವ(ಪಿ.ಪಿ.ಪಿ)ದಲ್ಲಿ ಪ್ರಾಕಶ್ ಆರ್ಟ್ಸ್ ಪ್ರೈವೇಟ್ ಲಿ. ಸಂಸ್ಥೆಯು ಹೊಸೂರು ಮುಖ್ಯ ರಸ್ತೆಯ ಚೆಕ್ ಪೋಸ್ಟ್ ಬಳಿ (ಸರ್ಜಾಪುರ ಜಂಕ್ಷನ್ ಹತ್ತಿರ) ನೂತನವಾಗಿ ನಿರ್ಮಿಸಿರುವ ಪಾದಚಾರಿ ಮೇಲ್ಸೇತುವೆ(ಸ್ಕೈವಾಕ್)ಯನ್ನು ಪೂಜ್ಯ ಮಹಾಪೌರರು, ಸನ್ಮಾನ್ಯ ಮಾಜಿ ಸಚಿವರು ಹಾಗೂ ಸ್ಥಳೀಯ ಶಾಸಕರಾದ ಶ್ರೀ ರಾಮಲಿಂಗರೆಡ್ಡಿ ಮತ್ತು ಮತ್ತು ಸಂಸದರು ಶ್ರೀ ತೇಜಸ್ವಿ ಸೂರ್ಯ ರವರು ಪೌರಕಾರ್ಮಿಕರಿಗೆ ಹೈಜಿನಿಕ್ ಕಿಟ್(ನೈರ್ಮಲ್ಯ ಕಿಟ್)ಗಳನ್ನು ವಿತರಿಸುವ ಮೂಲಕ ಉದ್ಘಾಟನೆ ಮಾಡಿದರು. ಈ ವೇಳೆ ಉಪಮಹಾಪೌರರು ಶ್ರೀ ರಾಮಮೋಹನ ರಾಜು, ವಿರೋಧ ಪಕ್ಷದ ನಾಯಕರು ಶ್ರೀ ಅಬ್ದುಲ್ ವಾಜೀದ್, ಮಾಜಿ ಮಹಾಪೌರರಾದ ಶ್ರೀ ಮಂಜುನಾಥ ರೆಡ್ಡಿ, ಸ್ಥಳೀಯ ಸದಸ್ಯರುಗಳಾದ ಶ್ರೀ ಚಂದ್ರಪ್ಪ, ಶ್ರೀ ಜಿ.ಮಂಜುನಾಥ್, ಶ್ರೀಮತಿ ಸರಳ ಸಿ. ಮಹೇಶ್ ಬಾಬು, ಮುಖ್ಯ ಅಭಿಯಂತರರು ಶ್ರೀ ಸೋಮಶೇಖರ್, ಅಧೀಕ್ಷಕ ಅಭಿಯಂತರರು ಶ್ರೀ ಬಸವರಾಜ್ ಕಬಾಡೆ ಹಾಗೂ ಇತರರು ಉಪಸ್ಥಿತರಿದ್ದರು.

ನಗರವನ್ನು ಸ್ವಚ್ಛಗೊಳಸಿ ಸುಂದರವಾಗಿ ಕಾಣುವಂತೆ ಮಾಡುವ ಪೌರಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಇಂದು ಪೌರಕಾರ್ಮಿಕರಿಗೆ ಹೈಜಿನಿಕ್ ಕಿಟ್‌ಗಳನ್ನು ವಿತರಿಸಲಾಗಿದೆ. ಮುಂದಿನ ದಿನಗಳಲ್ಲಿ ಪಾಲಿಕೆ ವ್ಯಾಪ್ತಿಯ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುವವರಿಗೂ ಕಿಟ್ ವಿತರಿಸಲು ಕ್ರಮ ವಹಿಸಲಾಗವುದು ಎಂದು ಮಹಾಪೌರರು ತಿಳಿಸಿದರು.

ಪಾದಚಾರಿ ಮೇಲ್ಸೇತುವೆ ಉದ್ಘಾಟಿಸಿದ ಬಳಿಕ ಮಾತನಾಡಿದ ಮಹಾಪೌರರು, ಪೌರಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಪಾಲಿಕೆ ವಿನೂತನ ಹೆಜ್ಜೆ ಇಟ್ಟಿದೆ. ಅದರಂತೆ ಈಗಾಗಲೇ 150 ಪೌರಕಾರ್ಮಿಕರಿಗೆ ಹೈಜಿನಿಕ್ ಕಿಟ್ ವಿತರಣೆ ಮಾಡಲಾಗಿದೆ. ಪೌರಕಾರ್ಮಿಕರು ಆರೋಗ್ಯವಾಗಿದ್ದರೆ ಮಾತ್ರ ನಗರ ಸುಂದರವಾಗಿ ಹಾಗೂ ನಾಗರೀಕರು ಆರೋಗ್ಯವಾಗಿರಲು ಸಾಧ್ಯ ಎಂದು ಹೇಳಿದರು.

ಹೊಸೂರು ಮುಖ್ಯರಸ್ತೆ ಸರ್ಜಾಪುರ ಜಂಕ್ಷನ್‌ನಲ್ಲಿ ಪಾದಚಾರಿ ಮೇಲ್ಸೇತುವೆ ಅಗತ್ಯ ತುಂಬಾ ಇತ್ತು. ಆ ನಿಟ್ಟಿನಲ್ಲಿ ಸಾರ್ವಜನಿಕರ ಓಡಾಟಕ್ಕೆ ಅನುಕೂಲವಾಗಲು ಪ್ರಕಾಶ್ ಆರ್ಟ್ಸ್ ಪ್ರೈವೇಟ್ ಲಿ. ಸಂಸ್ಥೆಯು ಸಾರ್ವಜನಿಕ ಖಾಸಗಿ ಸಹಭಾಗಿತ್ವ(ಪಿ.ಪಿ.ಪಿ)ದಲ್ಲಿ ಸುಸಜ್ಜಿತ ಸ್ಕೈವಾಕ್ ನಿರ್ಮಾಣ ಮಾಡಲಾಗಿದೆ. ವಿನೂತನ ರೀತಿಯಲ್ಲಿ ಸ್ಕೈವಾಕ್ ಅನ್ನು ನಿರ್ಮಿಸಿದ್ದು, ಸಿಸಿ ಕ್ಯಾಮೆರಾ, ಎರಡೂ ಬದಿಯಲ್ಲಿ ಲಿಫ್ಟ್, ಸಾರ್ವಜನಿಕರು ರಾತ್ರಿ ವೇಳೆ ಸುರಕ್ಷಿತವಾಗಿ ತೆರಳಲು ಎಲ್.ಇ.ಡಿ ವಿದ್ಯುತ್ ದೀಪಗಳನ್ನು ಅಳವಡಿಸಲಾಗಿದೆ. ಇದೇ ಮಾದರಿಯಲ್ಲಿ ಬೇರೆಡೆಯೂ ಸ್ಕೈವಾಕ್‌ಗಳನ್ನು ನಿರ್ಮಾಣ ಮಾಡಬೇಕು ಎಂದು ಹೇಳಿದರು.

**ಸಂಸದರಾದ ತೇಜಸ್ವಿ ಸೂರ್ಯ ಮಾತನಾಡಿ,** ನಗರದಲ್ಲಿ ದಿನೇ ದಿನೆ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ. ಅದನ್ನು ಕಡಿಮೆ ಮಾಡಬೇಕಾದರೆ ನಾಗರೀಕರು ಖಾಸಗಿ ವಾಹನಗಳನ್ನು ಬಳಸುವ ಬದಲು ಹೆಚ್ಚಾಗಿ ಸಾರ್ವಜನಿಕ ಸಾರಿಗೆ ಬಳಸಿದರೆ ಸಂಚಾರ ದಟ್ಟಣೆ ನಿವಾರಣೆಯಾಗಲಿದೆ ಎಂದು ತಿಳಿಸಿದರು.

ಪಾದಚಾರಿ ಮೇಲ್ಸೇತುವೆಗಳು ನಿರ್ಮಾಣ ಮಾಡುವುದರಿಂದ ಹಿರಿಯ ನಾಗರೀಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಹೆಚ್ಚು ಅನುಕೂಲವಾಗಲಿದೆ. ಅಗತ್ಯವಿರುವ ಸ್ಥಳಗಳಲ್ಲಿ ಸ್ಕೈವಾಕ್‌ಗಳನ್ನು ನಿರ್ಮಿಸಿದರೆ ಪಾದಚಾರಿಗಳಿಗೆ ಹೆಚ್ಚು ಸಹಕಾರಿಗಲಿದೆ ಎಂದು ಹೇಳಿದರು.

**ಶಾಸಕರಾದ ರಾಮಲಿಂಗರೆಡ್ಡಿ ಮಾತನಾಡಿ,** ಪಾದಚಾರಿಗಳ ಸುಗಮ ಸಂಚಾರಕ್ಕಾಗಿ ನಗರದಲ್ಲಿ ಈಗಾಗಲೇ ಸಾಕಷ್ಟು ಸ್ಕೈವಾಕ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಸ್ಕೈವಾಕ್‌ಗಳನ್ನು ನಿರ್ಮಾಣ ಮಾಡಿದ ಬಳಿಕ ಅದನ್ನು ನಿರ್ವಹಣೆ ಮಾಡುವುದು ಕೂಡಾ ಬಹಳ ಮುಖ್ಯ. ಹೆಚ್ಚು ಬೇಡಿಕೆ ಇರುವ ಕಡೆ ಸ್ಕೈವಾಕ್‌ಗಳನ್ನು ನಿರ್ಮಿಸಿ ಪಾದಚಾರಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**